# Akashvani : Bangalore
# National Bulletin In Kannada
# 09.07.2024 / 19.35 hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**09.07.2024 19.35 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಭಾರತ-ರಷ್ಯಾ ಒಪ್ಪಂದದಿಂದ ಅಂತಾರಾಷ್ಟ್ರೀಯ ತೈಲ ಮಾರುಕಟ್ಟೆಯಲ್ಲಿ ಸ್ಥಿರತೆ; ಪ್ರಧಾನಿ ನರೇಂದ್ರ ಮೋದಿ

೨. ಹತ್ರಾಸ್ ಕಾಲ್ತುಳಿತ ಪ್ರಕರಣ; ಎಸ್ಐಟಿ ವರದಿ ಆಧರಿಸಿ ಆರು ಅಧಿಕಾರಿಗಳನ್ನು ಅಮಾನತುಗೊಳಿಸಿದ ಉತ್ತರ ಪ್ರದೇಶ ಸರ್ಕಾರ

೩. ಮುಂಬೈ ಷೇರು ಮಾರುಕಟ್ಟೆ; ದಾಖಲೆಯ ಏರಿಕೆ ಕಂಡ ಸೆನ್ಸೆಕ್ಸ್, ನಿಫ್ಟಿ

೪. ಮಹಿಳಾ ಟಿ-೨೦ ಕ್ರಿಕೆಟ್: ಭಾರತ ಮತ್ತು ದಕ್ಷಿಣ ಆಫ್ರಿಕಾ ಮುಖಾಮುಖಿ

**<><*<><>*><>**

ಭಾರತವನ್ನು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯನ್ನಾಗಿ ಮಾಡುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ರಷ್ಯಾದ ಮಾಸ್ಕೋದಲ್ಲಿ ಭಾರತೀಯ ಸಮುದಾಯವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಇಂದಿನ ಭಾರತ, ಯಾವ ಗುರಿಯನ್ನು ಹೊಂದಿದ್ದರೂ ಸಹ ಅದನ್ನು ಸಾಧಿಸುತ್ತದೆ ಎಂದರು. ಮೂರನೇ ಬಾರಿಗೆ ತಮ್ಮ ಸರ್ಕಾರ ರಚನೆಯಾದ ನಂತರ ಭಾರತೀಯ ಸಮುದಾಯದೊಂದಿಗೆ ಪ್ರಧಾನಿಯವರ ಮೊದಲ ಸಂವಾದ ಇದಾಗಿದೆ. ಮೂರು ಪಟ್ಟು ಹೆಚ್ಚು ಶಕ್ತಿ ಮತ್ತು ಮೂರು ಪಟ್ಟು ಹೆಚ್ಚು ವೇಗದಲ್ಲಿ ಕೆಲಸ ಮಾಡುವ ಪ್ರತಿಜ್ಞೆ ಮಾಡಿದ್ದೇನೆ. ಇಂದು ಭಾರತ, ವಿಶ್ವಕ್ಕೆ ಡಿಜಿಟಲ್ ವಹಿವಾಟಿನ ಅತ್ಯಂತ ವಿಶ್ವಾಸಾರ್ಹ ಮಾದರಿಯನ್ನು ನೀಡುತ್ತಿದೆ ಮತ್ತು ಸಾಮಾಜಿಕ ಕ್ಷೇತ್ರದ ಅತ್ಯುತ್ತಮ ನೀತಿಗಳ ಮೂಲಕ ತನ್ನ ನಾಗರಿಕರನ್ನು ಸಬಲೀಕರಣಗೊಳಿಸುತ್ತಿದೆ. ಕಳೆದ ಹತ್ತು ವರ್ಷಗಳಲ್ಲಿ ದೇಶ ಸಾಧಿಸಿರುವ ಅಭಿವೃದ್ಧಿಯ ವೇಗಕ್ಕೆ ಇಡೀ ವಿಶ್ವವೇ ಬೆರಗಾಗಿದೆ ಎಂದು ಪ್ರಧಾನಿ ಹೇಳಿದರು. ಜಗತ್ತಿನಾದ್ಯಂತ ಜನರು ಭಾರತಕ್ಕೆ ಬಂದಾಗ ಭಾರತ ಪರಿವರ್ತನೆಯಾಗುತ್ತಿದೆ ಎಂಬ ಅಭಿಪ್ರಾಯ ವ್ಯಕ್ತಪಡಿಸುತ್ತಾರೆ. ಭಾರತದಲ್ಲಿನ ಈ ಬದಲಾವಣೆಯು ವ್ಯವಸ್ಥೆ ಮತ್ತು ಮೂಲಸೌಕರ್ಯದಲ್ಲಿ ಮಾತ್ರವಲ್ಲ, ಈ ಬದಲಾವಣೆಯು ದೇಶದ ಪ್ರತಿಯೊಬ್ಬ ನಾಗರಿಕ ಮತ್ತು ಯುವಕರ ಆತ್ಮವಿಶ್ವಾಸದಲ್ಲಿಯೂ ಗೋಚರಿಸುತ್ತದೆ ಎಂದು ಹೇಳಿದರು ಜಾಗತಿಕ ಸಮೃದ್ಧಿಗೆ ಹೊಸ ಶಕ್ತಿ ನೀಡಲು ಭಾರತ ಮತ್ತು ರಷ್ಯಾ ಜೊತೆಯಾಗಿ ಕಾರ್ಯನಿರ್ವಹಿತ್ತಿವೆ. ಭಾರತದ ಬೆಳವಣಿಗೆಯ ಹೊಸ ವೇಗವು, ಪ್ರಪಂಚದ ಅಭಿವೃದ್ಧಿಯಲ್ಲಿ ಹೊಸ ಅಧ್ಯಾಯವನ್ನು ಬರೆಯಲಿದೆ. ಶಾಂತಿ, ಸಂವಾದ ಮತ್ತು ರಾಜತಾಂತ್ರಿಕತೆಯ ಬಗ್ಗೆ ಭಾರತ ಮಾತನಾಡುವಾಗ ಇಡೀ ಜಗತ್ತು ಅದನ್ನು ಆಲಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಜಾಗತಿಕ ಆರ್ಥಿಕತೆಯ ಬೆಳವಣಿಗೆಯಲ್ಲಿ ಭಾರತದ ಕೊಡುಗೆಯು ಶೇಕಡಾ ೧೫ ರಷ್ಟಿದೆ ಮತ್ತು ಮುಂಬರುವ ದಿನಗಳಲ್ಲಿ ಈ ಪ್ರಮಾಣ ಮತ್ತಷ್ಟು ಏರಿಕೆಯಾಗಲಿದೆ ಎಂದು ಹೇಳಿದರು. ಕಜಾನ್ ಮತ್ತು ಯೆಕಟೆರಿನ್ ಬರ್ಗ್‌ನಲ್ಲಿ ಹೊಸ ರಾಜತಾಂತ್ರಿಕ ಕಚೇರಿಗಳನ್ನು ತೆರೆಯಲು ಭಾರತ ಮತ್ತು ರಷ್ಯಾ ನಿರ್ಧರಿಸಿವೆ. ಇದು ಉಭಯ ದೇಶಗಳ ನಡುವಿನ ಪ್ರಯಾಣ ಮತ್ತು ವ್ಯಾಪಾರ ವಹಿವಾಟುಗಳನ್ನು ಹೆಚ್ಚಿಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು, ಮಾಸ್ಕೋದಲ್ಲಿರುವ ಹುತಾತ್ಮ ಯೋಧರ ಸ್ಮಾರಕಕ್ಕೆ ಭೇಟಿ ನೀಡಿ ಗೌರವ ನಮನ ಸಲ್ಲಿಸಿದರು. ಎರಡನೇ ಮಹಾಯುದ್ಧದಲ್ಲಿ ಮಡಿದ ಸೋವಿಯತ್ ಯೋಧರ ಸ್ಮರಣಾರ್ಥ ಇಲ್ಲಿ ಸ್ಮಾರಕ ನಿರ್ಮಿಸಲಾಗಿದೆ. ಮುಂಬರುವ ವರ್ಷಗಳಲ್ಲಿ ಭಾರತ-ರಷ್ಯಾ ಬಾಂಧವ್ಯ ಮತ್ತಷ್ಟು ಬಲಗೊಳ್ಳಲಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ವಿಶ್ವಾಸ ವ್ಯಕ್ತಪಡಿಸಿದರು. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗಿನ ಭೇಟಿಯ ಸಂದರ್ಭದಲ್ಲಿ ಮಾತನಾಡಿದ ಅವರು, ಸುಮಾರು ೧೦ ವರ್ಷಗಳಲ್ಲಿ ಪುಟಿನ್ ಅವರನ್ನು ೧೭ ಬಾರಿ ಭೇಟಿಯಾಗಿದ್ದೇನೆ. ಕಳೆದ ೨೫ ವರ್ಷಗಳಲ್ಲಿ ಸುಮಾರು ೨೨ ದ್ವಿಪಕ್ಷೀಯ ಸಭೆಗಳನ್ನು ನಡೆಸಲಾಗಿದೆ. ಇದು ಸಂಬಂಧಗಳ ಆಳವನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು. ಕಳೆದ ೪೦ ರಿಂದ ೫೦ ವರ್ಷಗಳಿಂದ ಭಾರತ ಭಯೋತ್ಪಾದನೆಯನ್ನು ಎದುರಿಸುತ್ತಿದೆ. ಎಲ್ಲಾ ರೀತಿಯ ಭಯೋತ್ಪಾದನೆಯನ್ನು ಭಾರತ ಖಂಡಿಸುತ್ತದೆ. ಕಳೆದ ಐದು ವರ್ಷಗಳಲ್ಲಿ ಕೋವಿಡ್ -೧೯ ಸಾಂಕ್ರಾಮಿಕ ರೋಗ ಸೇರಿದಂತೆ ಅನೇಕ ಸವಾಲುಗಳನ್ನು ಜಗತ್ತು ಎದುರಿಸಿದೆ ಎಂದರು. ಜಗತ್ತು ಇಂಧನಗಳ ಸವಾಲನ್ನು ಎದುರಿಸುತ್ತಿರುವಾಗ, ರಷ್ಯಾದ ಬೆಂಬಲವು ಸಾಮಾನ್ಯಜನರ ಪೆಟ್ರೋಲ್ ಮತ್ತು ಡೀಸೆಲ್ ಅಗತ್ಯಗಳನ್ನು ಪೂರೈಸುವಲ್ಲಿ ಭಾರತಕ್ಕೆ

ಸಹಾಯ ಮಾಡಿತು. ಇಂಧನಕ್ಕೆ ಸಂಬಂಧಿಸಿದಂತೆ ಭಾರತ-ರಷ್ಯಾ ಒಪ್ಪಂದವು ಅಂತಾರಾಷ್ಟ್ರೀಯ ತೈಲ ಮಾರುಕಟ್ಟೆಗೆ ಸ್ಥಿರತೆಯನ್ನು ತರುವಲ್ಲಿ ದೊಡ್ಡ ಪಾತ್ರವನ್ನು ವಹಿಸಿದೆ ಎಂದು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><*<><>*><>

ಹತ್ರಾಸ್ ಕಾಲ್ತುಳಿತ ಪ್ರಕರಣ ಕುರಿತು ವಿಶೇಷ ತನಿಖಾ ತಂಡ- ಎಸ್‌ಐಟಿ, ಇಂದು ಉತ್ತರ ಪ್ರದೇಶ ಸರ್ಕಾರಕ್ಕೆ ವರದಿ ಸಲ್ಲಿಸಿದೆ. ಇದರ ಆಧಾರದ ಮೇಲೆ ಸರ್ಕಾರ, ಆರು ಅಧಿಕಾರಿಗಳನ್ನು ಅಮಾನತುಗೊಳಿಸಿದೆ. ಎಸ್‌ಐಟಿ, ಕಾರ್ಯಕ್ರಮದ ಆಯೋಜಕರ ನಿರ್ಲಕ್ಷ್ಯವೇ ಈ ಘಟನೆಗೆ ಪ್ರಮುಖ ಕಾರಣವೆಂದು ಹೇಳಿದೆ. ವರದಿ ಆಧರಿಸಿ, ಹತ್ರಾಸ್ ಜಿಲ್ಲೆಯ ಎಸ್‌ಡಿಎಂ, ಸಿಒ ಮತ್ತು ತಹಸೀಲ್ದಾರ್ ಸೇರಿದಂತೆ ೬ ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ. ಎಸ್‌ಐಟಿ ತಂಡ, ಈ ಘಟನೆಗೆ ಸ್ಥಳೀಯ ಆಡಳಿತವನ್ನೇ ಹೊಣೆಗಾರರನ್ನಾಗಿಸಿದೆ. ಕಾರ್ಯಕ್ರಮದ ಆಯೋಜಕರು ನೆರೆದಿದ್ದ ಜನಸಮೂಹಕ್ಕೆ ಸೂಕ್ತ ವ್ಯವಸ್ಥೆ ಕಲ್ಪಿಸಲಿಲ್ಲ ಎಂದು ತನ್ನ ವರದಿಯಲ್ಲಿ ತಿಳಿಸಿದೆ. ಎಸ್‌ಐಟಿ ತಂಡ, ಇದೇ ತಿಂಗಳ ೨, ೩ ಮತ್ತು ೫ ರಂದು ಅಪಘಾತ ಸ್ಥಳಕ್ಕೆ ಭೇಟಿ ನೀಡಿ ವರದಿ ಸಲ್ಲಿಸಲು ಸುಮಾರು ೧೨೫ ಜನರನ್ನು ವಿಚಾರಣೆಗೆ ಒಳಪಡಿಸಿತ್ತು.

<><*<><>*><>

ರಾಷ್ಟ್ರೀಯ ವಿಜ್ಞಾನ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ- ಎನ್‌ಐಎಸ್‌ಇಆರ್ ವಿದ್ಯಾರ್ಥಿಗಳು ತಮ್ಮ ಶಿಕ್ಷಣ ಮತ್ತು ಜ್ಞಾನವನ್ನು ಮನುಕುಲ ಮತ್ತು ರಾಷ್ಟ್ರಕ್ಕಾಗಿ ಮೀಸಲಿಡಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ ನೀಡಿದರು. ಭುವನೇಶ್ವರದಲ್ಲಿಂದು ನಡೆದ ಎನ್‌ಐಎಸ್‌ಇಆರ್ ನ ೧೩ನೇ ಪದವಿ ಪ್ರದಾನ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಅವರು, ಆಯಾ ಕ್ಷೇತ್ರಗಳಲ್ಲಿ ಅತ್ಯುತ್ತಮ ಕೆಲಸ ಮಾಡುವ ಮೂಲಕ ದೇಶಕ್ಕೆ ಕೀರ್ತಿ ತರುವಂತೆ ಪ್ರೇರೇಪಿಸಿದರು. ಶಿಕ್ಷಣ ಅಮೃತವಿದ್ದಂತೆ. ಇದು ಭಾರತೀಯ ಭೌತಶಾಸ್ತ್ರಜ್ಞ ಸರ್ ಸಿ.ವಿ.ರಾಮನ್ ಹಾಗೂ ಖಗೋಳಶಾಸ್ತ್ರಜ್ಞ ಮತ್ತು ಗಣಿತಶಾಸ್ತ್ರಜ್ಞ ಪಠಾನಿ ಸಾಮಂತ ಅವರಂತಹ ವ್ಯಕ್ತಿಯನ್ನು ಅಮರನನ್ನಾಗಿ ಮಾಡಿದೆ ಎಂದು ಹೇಳಿದರು. ಅಧ್ಯಯನ ಮತ್ತು ಸಂಶೋಧನೆಯ ಸಮಯದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನದ ದುರುಪಯೋಗದ ಬಗ್ಗೆ ಎಚ್ಚರಿಕೆ ವಹಿಸುವಂತೆ ವಿದ್ಯಾರ್ಥಿಗಳಿಗೆ ಇದೇ ವೇಳೆ ರಾಷ್ಟ್ರಪತಿಯವರು ಸಲಹೆ ನೀಡಿದರು.

<><*<><>*><>

ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು, ಸಹಕಾರಿ ಶಿಕ್ಷಣ ವ್ಯವಸ್ಥೆಯನ್ನು ರೂಪಿಸಲು ಒಟ್ಟಾಗಿ ಕೆಲಸ ಮಾಡಬೇಕು ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಕರೆ ನೀಡಿದ್ದಾರೆ. ನವದೆಹಲಿಯಲ್ಲಿಂದು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳೊಂದಿಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪರಿಶೀಲನಾ ಸಭೆಯನ್ನುದ್ದೇಶಿಸಿ ಮಾತನಾಡಿದ ಧರ್ಮೇಂದ್ರ ಪ್ರಧಾನ್, ಶಾಲಾ ಶಿಕ್ಷಣದ ಸಮಗ್ರ ಅಭಿವೃದ್ಧಿಗಾಗಿ ಮುಂದಿನ ಐದು ವರ್ಷಗಳ ಮಾರ್ಗಸೂಚಿಯ ಕುರಿತು ತಮ್ಮ ಆಲೋಚನೆಗಳನ್ನು ಹಂಚಿಕೊಂಡರು. ಶಿಕ್ಷಣವು ಪ್ರಧಾನಮಂತ್ರಿ ನರೇಂದ್ರ ಮೋದಿಯವರ 'ವಿಕಸಿತ ಭಾರತ'ದ ಪ್ರಮುಖ ಆಧಾರ ಸ್ತಂಭವಾಗಿದ್ದು, ಈ ಗುರಿಯನ್ನು ಸಾಧಿಸಲು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಒಟ್ಟಾಗಿ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು. ರಾಷ್ಟ್ರೀಯ ಶಿಕ್ಷಣ ನೀತಿಯ ಅನುಷ್ಠಾನವು ಭಾರತವನ್ನು ಜ್ಞಾನದ ಪ್ರಮುಖ ಶಕ್ತಿಯಾಗಿ ಪರಿವರ್ತಿಸಲು ಮತ್ತು ಗುಣಮಟ್ಟದ ಶಿಕ್ಷಣಕ್ಕೆ ಸಮಾನ ಅವಕಾಶ ಕಲ್ಪಿಸಲು ಪ್ರಮುಖವಾಗಿದೆ. ರಾಷ್ಟ್ರೀಯ ಶಿಕ್ಷಣ ನೀತಿ-೨೦೨೦ ಮಾತೃಭಾಷೆ ಮತ್ತು ಎಲ್ಲಾ ಭಾರತೀಯ ಭಾಷೆಗಳಲ್ಲಿ ಶಿಕ್ಷಣದ ಮಹತ್ವವನ್ನು ಒತ್ತಿಹೇಳುತ್ತದೆ ಎಂದು ಧರ್ಮೇಂದ್ರ ಪ್ರಧಾನ್ ಹೇಳಿದರು.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ಮತ್ತು ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ದಾಖಲೆಯ ಏರಿಕೆ ಕಂಡಿದೆ. ಸೆನ್ಸೆಕ್ಸ್ ೪೯೧ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ದಾಖಲೆಯ ೮೦ ಸಾವಿರದ ೩೫೨ ಅಂಕಗಳು ದಾಖಲಾಗಿದೆ. ಇದೇ ವೇಳೆ ನಿಫ್ಟಿ ೧೧೩ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೪೩೩ ಅಂಕಗಳು ದಾಖಲಾಗಿದೆ. ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೩ ರೂಪಾಯಿ ೪೯ ಪೈಸೆಯಷ್ಟಾಗಿದೆ.

<><*<><>*><>

ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರು ಇಂದು ರಾಜ್ಯದ ಕುಮಾವೂನ್‌ನ ಪ್ರವಾಹ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆ ನಡೆಸಿದರು. ಜುಲೈ ೭ ಮತ್ತು ೮ ರಂದು ಭಾರೀ ಮಳೆಯಿಂದಾಗಿ ಉಧಮ್ ಸಿಂಗ್ ನಗರ ಮತ್ತು ಚಂಪಾವತ್ ಜಿಲ್ಲೆಗಳ ಹಲವು ಸ್ಥಳಗಳು ಜಲಾವೃತಗೊಂಡಿವೆ. ಉಧಮ್ ಸಿಂಗ್ ನಗರದ ಸಿತಾರ್‌ಗಂಜ್ ಮತ್ತು ಖತಿಮಾ ತಾಲೂಕುಗಳ ಒಂದು ಸಾವಿರದ ೪೦೦ ಹೆಚ್ಚು ಜನರನ್ನು ರಕ್ಷಿಸಲಾಗಿದ್ದು, ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಮತ್ತೊಂದೆಡೆ, ಚಂಪಾವತ್

ಜಿಲ್ಲೆಯ ಪೂರ್ಣಗಿರಿ ತಾಲೂಕಿನ ೧೫೦ ಕುಟುಂಬಗಳ ೪೦೦ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಈ ಭಾಗದ ೧೨೦ ಸಂತ್ರಸ್ತರಿಗೆ ಇದುವರೆಗೆ ಒಟ್ಟು ೭ ಲಕ್ಷ ರೂಪಾಯಿಗಳ ನೆರವು ವಿತರಿಸಲಾಗಿದೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ. ಇದೇ ವೇಳೆ, ನಾಳೆ ಉತ್ತರಾಖಂಡದ ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದು, ಯೆಲ್ಲೋ ಅಲರ್ಟ್ ಘೋಷಿಸಿದೆ.

<><*<><>*><>

ಮುಂಬೈನಲ್ಲಿ ನಿನ್ನೆ ರಾತ್ರಿ ಸುರಿದ ಭಾರೀ ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತಗೊಂಡಿದ್ದು, ಇಂದು ಮಳೆ ಸುಧಾರಿಸಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ತಗ್ಗು ಪ್ರದೇಶಗಳಲ್ಲಿ ನೀರು ನಿಂತಿದ್ದರಿಂದ ಸಂಚಾರಕ್ಕೆ ತೊಂದರೆಯಾಗಿದೆ. ಮುಂಬೈ, ನವಿ ಮುಂಬೈ, ಥಾಣೆ, ರಾಯಗಢ, ಅಲಿಬಾಗ್ ಮತ್ತು ಪನ್ವೇಲ್‌ನಲ್ಲಿ ಶಾಲಾ-ಕಾಲೇಜುಗಳಿಗೆ ಇಂದು ರಜೆ ಘೋಷಿಸಲಾಗಿತ್ತು. ಮುಂದಿನ ೨೪ ಗಂಟೆಗಳಲ್ಲಿ ಈಶಾನ್ಯ ಭಾರತದಲ್ಲಿ ತೀವ್ರ ಮಳೆಯಾಗಲಿದೆ. ಮಧ್ಯ ಭಾರತದಲ್ಲಿ ಧಾರಾಕಾರ ಮಳೆ ಸುರಿಯಲಿದೆ. ಅಲ್ಲದೆ, ಪಶ್ಚಿಮ ಕರಾವಳಿ ಪ್ರದೇಶದಲ್ಲಿ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇನ್ನೊಂದೆಡೆ, ಕರ್ನಾಟಕದ ಉಡುಪಿ, ಉತ್ತರ ಕನ್ನಡ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಮುಂದಿನ ೪ ದಿನಗಳ ಕಾಲ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಮುಂದಿನ ೨೪ ಗಂಟೆಗಳಲ್ಲಿ ಬೆಳಗಾವಿ, ಬೀದರ್, ಕಲಬುರಗಿ, ಗದಗ, ಹಾಸನ, ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಗುಡುಗುಸಹಿತ ಮಳೆಯಾಗುವ ಸಾಧ್ಯತೆಯಿದ್ದು, ಬಾಗಲಕೋಟೆ, ಹಾವೇರಿ, ಕೊಪ್ಪಳ, ರಾಯಚೂರು, ವಿಜಯಪುರ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<><>*><>

ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ಭಾರತ ಮಹಿಳಾ ಕ್ರಿಕೆಟ್ ತಂಡ ದಕ್ಷಿಣ ಆಫ್ರಿಕಾ ವಿರುದ್ಧ, ಸರಣಿಯ ಮೂರನೇ ಮತ್ತು ಅಂತಿಮ ಟಿ-೨೦ ಪಂದ್ಯ ನಡೆಯುತ್ತಿದೆ. ಟಾಸ್ ಗೆದ್ದ ಭಾರತ, ಬೌಲಿಂಗ್ ಆಯ್ಕೆ ಮಾಡಿಕೊಂಡಿದೆ.  ಇತ್ತೀಚಿನ ವರದಿ ಬಂದಾಗ, ದಕ್ಷಿಣ ಆಫ್ರಿಕಾ ತಂಡ ೭.೪ ವಿಕೆಟ್ ನಷ್ಟಕ್ಕೆ ೪೫ ರನ್ ಗಳಿಸಿ ಆಡುತ್ತಿದೆ.  ಇದೇ ಮೈದಾನದಲ್ಲಿ ನಡೆದ ಮೊದಲ ಪಂದ್ಯವನ್ನು ೧೨ ರನ್‌ಗಳಿಂದ ಗೆದ್ದ ದಕ್ಷಿಣ ಆಫ್ರಿಕಾ ತಂಡ, ಪ್ರಸ್ತುತ ಸರಣಿಯಲ್ಲಿ ೧-೦ ಅಂತರದಲ್ಲಿ ಮುನ್ನಡೆ ಪಡೆದುಕೊಂಡಿದೆ. ಎರಡನೇ ಪಂದ್ಯ ಮಳೆಯಿಂದಾಗಿ ರದ್ದಾಗಿತ್ತು. ಭಾರತ ತಂಡ ಈ  ಪಂದ್ಯವನ್ನು ಗೆಲ್ಲುವ ಮೂಲಕ ಸರಣಿಯನ್ನು ಸಮಬಲಗೊಳಿಸುವ ವಿಶ್ವಾಸ ಹೊಂದಿದೆ.

<><*<><>*><>

ಲಂಡನ್‌ನಲ್ಲಿ ನಡೆಯುತ್ತಿರುವ ವಿಂಬಲ್ಡನ್ ಟೆನಿಸ್ ಟೂರ್ನಿಯ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಇಂದು ನಡೆಯುತ್ತಿರುವ ಕ್ವಾರ್ಟರ್ ಫೈನಲ್ಸ್ ಪಂದ್ಯದಲ್ಲಿ ಅಗ್ರ ಶ್ರೇಯಾಂಕಿತ ಆಟಗಾರ ಜಾನಿ ಸಿನ್ನರ್ ಮತ್ತು ಐದನೇ ಶ್ರೇಯಾಂಕಿತ ಆಟಗಾರ ಡೇನಿಯಲ್ ಮೆಡ್ವೆಡೇವ್ ಮುಖಾಮುಖಿಯಾಗಿದ್ದಾರೆ. ಮತ್ತೊಂದು ಕ್ವಾರ್ಟರ್ ಫೈನಲ್ಸ್ ಪಂದ್ಯದಲ್ಲಿ ಮೂರನೇ ಶ್ರೇಯಾಂಕಿತ ಆಟಗಾರ ಕಾರ್ಲೋಸ್ ಅಲ್ಕರಾಜ್ ಮತ್ತು ೧೨ನೇ ಶ್ರೇಯಾಂಕಿತ ಆಟಗಾರ ಟಾಮಿ ಪೌಲ್ ನಡುವೆ ಸೆಣಸಾಟ ನಡೆಯುತ್ತಿದೆ. ಇದೇ ವೇಳೆ ವುಮೆನ್ಸ್ ಸಿಂಗಲ್ಸ್ ವಿಭಾಗದ ಮೊದಲ ಕ್ವಾರ್ಟರ್ ಫೈನಲ್ಸ್ ಪಂದ್ಯದಲ್ಲಿ ರಾಡೋವಿಸ್ಕ್ ಮತ್ತು ಡಿ.ವೆಕಿಕ್ ಮುಖಾಮುಖಿಯಾಗಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>  ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**